# ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ 11 ಇಎಸ್‌ಟಿ(9) 2019-20/133

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ: 27/05/2020.

## ಸುತ್ತೋಲೆ

ವಿಷಯ: 2019-20ನೇ ಸಾಲಿನ ವಾರ್ಷಿಕ ಕಾರ್ಯ ನಿರ್ವಹಣಾ ವರದಿಗಳನ್ನು ಕಳುಹಿಸುವ ಕುರಿತು.

ಉಲ್ಲೇಖ: 1. ಈ ಕಛೇರಿ ಪತ್ರ ಸಂಖ್ಯೆ: ಡಿಟಿಇ/11/ಇಎಸ್‌ಟಿ(9) 2019-2020 ದಿನಾಂಕ: 10/03/2020

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದಲ್ಲಿ ಮತ್ತು ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು ಹಾಗೂ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಗಳು 2019-2020ನೇ ಸಾಲಿನ ಕಾರ್ಯ ನಿರ್ವಹಣಾ ವರದಿಗಳನ್ನು ದಿನಾಂಕ:15/04/2020 ರ ಒಳಗಾಗಿ ನಿರ್ದೇಶನಾಲಯಕ್ಕೆ ಸಲ್ಲಿಸುವಂತೆ ಉಲ್ಲೇಖದ ಪತ್ರದಲ್ಲಿ ತಿಳಿಸಲಾಗಿತ್ತು. ಆದರೆ ಕೋವಿಡ್-19 (ಕೊರೊನಾ ವೈರಸ್ ಪಿಡುಗಿನಿಂದಾಗಿ ಇಡೀ ರಾಜ್ಯವೇ ಲಾಕ್‌ಡೌನ್ ಆದ ಪ್ರಯುಕ್ತ ದಿನಾಂಕ:15/04/2020ರ ಒಳಗಾಗಿ ಸಲ್ಲಿಸದೇ ಇರುವುದು ಗಮನಕ್ಕೆ ಬಂದಿರುತ್ತದೆ. ಆದುದರಿಂದ ದಿನಾಂಕ:10/06/2020ರ ಒಳಗಾಗಿ ಕಡ್ಡಾಯವಾಗಿ ಕಾರ್ಯ ನಿರ್ವಹಣಾ ವರದಿಗಳನ್ನು ನಿರ್ದೇಶನಾಲಯಕ್ಕೆ ಸಲ್ಲಿಸತಕ್ಕದ್ದು. ಇಲ್ಲವಾದಲ್ಲಿ ಸಂಬಂಧಪಟ್ಟ ಸಿಬ್ಬಂದಿಗಳ ಮುಂಬಡ್ತಿ/ಕಾಲಿಕ ವೇತನ ಬಡ್ತಿ, ಇತ್ಯಾದಿ ಪ್ರಸ್ತಾವನೆಗಳ ಬಗ್ಗೆ ಕ್ರಮವಹಿಸುವಾಗ ಕಾರ್ಯ ನಿರ್ವಹಣಾ ವರದಿಗಳು ಲಭ್ಯವಿಲ್ಲವೆಂದು ಪರಿಗಣಿಸಬೇಕಾಗುತ್ತದೆ. ಹಾಗೂ ಮುಂದಿನ ಆಗು ಹೋಗುಗಳಿಗೆ ಸಂಬಂಧಪಟ್ಟ ಸಿಬ್ಬಂದಿಯವರನ್ನು ಹೊಣೆಗಾರರನ್ನಾಗಿ ಮಾಡಿ ಶಿಸ್ತು ಕ್ರಮ ಜರುಗಿಸಲಾಗುವುದು. ಆದುದರಿಂದ ದಿನಾಂಕ:10/06/2020ರ ಒಳಗಾಗಿ ಕಾರ್ಯ ನಿರ್ವಹಣಾ ವರದಿಗಳನ್ನು ನಿರ್ದೇಶನಾಲಯಕ್ಕೆ ಸಲ್ಲಿಸಲು ಈ ಮೂಲಕ ಸೂಚಿಸಿದೆ.

ನಿರ್ದೇಶಕರು

**ಇವರಿಗೆ:**

1. ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳು/ಕಿರಿಯ ತಾಂತ್ರಿಕ ಶಾಲೆಗಳು, ಸ್ಟೆರಿಕ್ ಸಂಸ್ಥೆ, ಬೆಂಗಳೂರು. ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್. ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
2. ಜಂಟಿ ನಿರ್ದೇಶಕರು (ಆಡಳಿತ)
3. ಆಡಳಿತಾಧಿಕಾರಿಯವರು.
4. ಸಹಾಯಕ ಆಡಳಿತಾಧಿಕಾರಿಗಳು(1, ಮತ್ತು 2,)
5. ನಿರ್ದೇಶಕರ ಆಪ್ತ ಶಾಖೆ
6. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಅವರ ವಿಭಾಗದ ಸಿಬ್ಬಂದಿಯವರ ರಹಸ್ಯ ವರದಿಗಳನ್ನು ದಿನಾಂಕ: 10-6-2020ರ ಒಳಗೆ ಸಲ್ಲಿಸತಕ್ಕದ್ದು.
7. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲು
8. ಕಡತದ ಪ್ರತಿ.

Rk-E-9-CR's Circular